ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 22ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ವರದಿಗಳನ್ನೊಪ್ಪಿಸುವುದು

1) **ಶ್ರೀ ಎಸ್. ಕುಮಾರ್ ಬಂಗಾರಪ್ಪ** (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2021-22ನೇ ಸಾಲಿನ ನಾಲ್ಕನೇ ವರದಿಯನ್ನೊಪ್ಪಿಸುವುದು.

2) **ಶ್ರೀ ಜಿ. ಸೋಮಶೇಖರ ರೆಡ್ಡಿ** (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2021-22ನೇ ಸಾಲಿನ ಮೂವತ್ತೇಳನೇ ವರದಿಯನ್ನೊಪ್ಪಿಸುವುದು.

3) **ಶ್ರೀ ಎಸ್. ಸುರೇಶ್ ಕುಮಾರ್** (ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ 2021-22ನೇ ಸಾಲಿನ ಮೂರನೇ ವರದಿಯನ್ನೊಪ್ಪಿಸುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ಮಹಾರಾಷ್ಟ್ರ, ಕರ್ನಾಟಕ ಹಾಗೂ ಕೇರಳ ರಾಜ್ಯಗಳ ನಡುವಿನ ಗಡಿ ವಿವಾದದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ ಹಾಗೂ ಇತರರು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವುದಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 2/ ..

3) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇದಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಶಾಸನ ರಚನೆ

I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–

ಅ) 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–

ಅ) 2022ನೇ ಸಾಲಿನ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

II. ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:–

ಅ) 2021ನೇ ಸಾಲಿನ ಬಂದಿಗಳ ಗುರುತಿಸುವಿಕೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಹಿಂಪಡೆಯುವುದು.

5. ಗಮನ ಸೆಳೆಯುವ ಸೂಚನೆಗಳು

1) **ಡಾ: ಅಜಯ ಧರ್ಮಸಿಂಗ್ ಅವರು** – ರಾಜ್ಯದ ವಿವಿಧ ಜಿಲ್ಲೆಯ ಪ್ರವಾಸಿ ತಾಣದಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ಮಿತ್ರರಾಗಿ (ಟೂರಿಸ್ಟ್ ಪೊಲೀಸ್) ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ನಿರಂತರ ಕರ್ತವ್ಯಕ್ಕೆ ನೇಮಿಸಿ, ಕರ್ತವ್ಯ ಭತ್ಯೆ ಹೆಚ್ಚಳ ಮಾಡಿ, ಉದ್ಯೋಗ ಭದ್ರತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

... 3/ ..

2) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ಆಡಳಿತ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಹೊಸದಾಗಿ ಜಿಲ್ಲೆಗಳನ್ನು ಮಾಡುವ ಸಂದರ್ಭದಲ್ಲಿ ಇಂಡಿ, ಚಡಚಣ, ಆಲಮೇಲ, ಸಿಂಧಗಿ, ದೇವರಹಿಪ್ಪರಗಿ ತಾಲ್ಲೂಕುಗಳನ್ನು ಒಗ್ಗೂಡಿಸಿ ಇಂಡಿ ಜಿಲ್ಲಾ ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಪಿ.ಟಿ. ಪರಮೇಶ್ವರ ನಾಯಕ್ ಅವರು** – ರೈತರ ಕೊಳವೆ ಬಾವಿ ಮತ್ತು ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪಡೆಯಲು ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಜೆಸ್ಕಾಂಗೆ ಸಲ್ಲಿಸಿರುವ ರೈತರ ಅರ್ಜಿಗಳನ್ನು ವಿಲೇವಾರಿ ಮಾಡಿ ಸಕ್ರಮಗೊಳಿಸುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ನೊಂದಣಿ ಕಚೇರಿಯಿಂದ ನೋಂದಣಿ ಹಣ/ಶುಲ್ಕದ ಮೊತ್ತವನ್ನು ಭರಿಸದೇ ಇರುವುದರಿಂದ ಆಗಿರುವ ವಂಚನೆ ಮತ್ತು ನಷ್ಟದ ಬಗ್ಗೆ ಹಾಗೂ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಂ.ಎಸ್. ಸೋಮಲಿಂಗಪ್ಪ ಅವರು** – ಸಿರಗುಪ್ಪ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭಾರಿ ಮಳೆಯಿಂದಾಗಿ ಹಾಳಾಗಿರುವ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ವೆಂಕಟರಾವ್ ನಾಡಗೌಡ ಅವರು** – ರಾಯಚೂರು, ಬಳ್ಳಾರಿ ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಜೋಳದ ಬೆಳೆ ಕಟಾವಿಗೆ ಬರುತ್ತಿರುವುದರಿಂದ ಕೂಡಲೇ M.S.P.ಯಲ್ಲಿ ಜೋಳ ಖರೀದಿಸಲು ಸಾಕಷ್ಟು ಕೇಂದ್ರಗಳನ್ನು ಸ್ಥಾಪಿಸದೇ ಇರುವುದರಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸುರತ್ಕಲ್ ಟೋಲ್‌ನಲ್ಲಿ ಸಂಗ್ರಹಿಸುತ್ತಿದ್ದ ಟೋಲ್ ದರವನ್ನು ಹೆಜಮಾಡಿ ಸಂಗ್ರಹ ಮಾಡಬಾರದು ಎಂಬುದರ ಬಗ್ಗೆ ಹಾಗೂ ಅವೈಜ್ಞಾನಿಕವಾಗಿ ನಿಗದಿಪಡಿಸಿರುವ ಟೋಲ್ ದರವನ್ನು ರದ್ದುಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಸ್ಪತ್ರೆಯಲ್ಲಿ ಗುತ್ತಿಗೆ ಆಧಾರದ ಮೇಲೆ ದೀರ್ಘ ಕಾಲದಿಂದ ಕಾರ್ಯನಿರ್ವಹಿಸುತ್ತಿದ್ದ ಮಹಿಳಾ ಸ್ವಚ್ಛತೆ ಮತ್ತು ನೈರ್ಮಲ್ಯ ಕಾರ್ಮಿಕರನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಡಿ.ಕೆ. ಶಿವಕುಮಾರ್ ಅವರು** – ರಾಮನಗರ ಜಿಲ್ಲೆ ಕನಕಪುರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭ ಮಾಡುವ ಕಾಮಗಾರಿಯನ್ನು ಇದುವರೆವಿಗೂ ಕೈಗೊಳ್ಳದಿರುವ ಬಗ್ಗೆ ಹಾಗೂ ಈ ಯೋಜನೆಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ಕಾಲಾವಕಾಶದ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶದ ಬಡ ಕುಟುಂಬದಿಂದ ಬಂದಂತಹ ಮಕ್ಕಳಿಗೆ ಉತ್ತಮ ಆಂಗ್ಲ ವಿದ್ಯಾಭ್ಯಾಸ ಒದಗಿಸಲು ವಿವಿಧ ಸ್ಥಳಗಳಲ್ಲಿ ಹೊಸದಾಗಿ ಪ್ರಾರಂಭಿಸಿರುವ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ ಹಾಗೂ ಸದರಿ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಅನುದಾನ ಬಿಡುಗಡೆಗೊಳಿಸುವ ಬಗ್ಗೆ ಹಾಗೂ ಸದರಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಸಿದ್ದು ಸವದಿ ಅವರು – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm